# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ತುರ್ತು ಕಾಮಗಾರಿಗಳ ಅನುಷ್ಠಾನಕ್ಕಾಗಿ ವಿಶೇಷ ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ: 1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/45/ಗ್ರಾನೀಸ(2)2012, ದಿನಾಂಕ:21.05.2012.
2. ಕೇಂದ್ರ ಸರ್ಕಾರದ ಆದೇಶ ಸಂಖ್ಯೆ: W-11032/06/2012/Water/144, ದಿ:10.07.2012.

--

**ಪೀಠಿಕೆ:**

ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿ ಅಂತರ್ಜಲ ಆಧಾರಿತ ಕುಡಿಯುವ ನೀರು ಸರಬರಾಜು ಯೋಜನೆಗಳು ವಿಫಲವಾಗುತ್ತಿದ್ದು, ಬೇಸಿಗೆಯಲ್ಲಿ ತೀವ್ರ ಕುಡಿಯುವ ನೀರಿನ ಸಮಸ್ಯೆ ಕಂಡುಬಂದಿರುವುದರಿಂದ, ತುರ್ತು ಕುಡಿಯುವ ನೀರು ಪೂರೈಕೆ ಯೋಜನೆಗಳನ್ನು ಅನುಷ್ಠಾನಗೊಳಿಸಲು ಹೆಚ್ಚುವರಿ / ವಿಶೇಷ ಅನುದಾನವನ್ನು ಉಲ್ಲೇಖಿತ (1)ರನ್ವಯ **ದಿನಾಂಕ:21.05.2012ರಂದು** ಬಿಡುಗಡೆ ಮಾಡಲಾಗಿದೆ. ಪ್ರಸ್ತುತ, ರಾಜ್ಯ ಮಟ್ಟದಲ್ಲಿ ಗ್ರಾಮೀಣ ಪ್ರದೇಶಗಳಲ್ಲಿ ತೊಂದರೆಯಾಗದಂತೆ ತುರ್ತು ಕುಡಿಯುವ ನೀರಿನ ಕಾಮಗಾರಿಗಳನ್ನು ಜಿಲ್ಲಾ ಪಂಚಾಯಿತಿಗಳು ಸಾರ್ವಜನಿಕ ಹಿತಾಸಕ್ತಿ ಮೇರೆಗೆ ಅನುಷ್ಠಾನಗೊಳಿಸಲು ರಾಜ್ಯದ **29** ಜಿಲ್ಲಾ ಪಂಚಾಯಿತಿಗಳಿಗೆ ಒಟ್ಟು **635.00**ಲಕ್ಷಗಳ ವಿಶೇಷ / ಹೆಚ್ಚುವರಿ ಅನುದಾನವನ್ನು ಬಿಡುಗಡೆ ಮಾಡಲು ನಿರ್ಧರಿಸಿದೆ. ಆದ್ದರಿಂದ, ಈ ಆದೇಶ.

## ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 45ಗ್ರಾನೀಸ(2)2012 ಬೆಂಗಳೂರು, ದಿನಾಂಕ:20.07.2012

ಪೀಠಿಕೆಯಲ್ಲಿನ ವಾಸ್ತವಾಂಶಗಳನ್ನು ಪರಿಶೀಲಿಸಿ, ರಾಜ್ಯದ **29** ಜಿಲ್ಲಾ ಪಂಚಾಯಿತಿಗಳ ವ್ಯಾಪ್ತಿಯ ಗ್ರಾಮೀಣ ಪ್ರದೇಶಗಳಲ್ಲಿ ತಲೆದೋರಿರುವ ಕುಡಿಯುವ ನೀರಿನ ಸಮಸ್ಯೆಯನ್ನು ಪರಿಹರಿಸಲು ಸ್ಥಳೀಯ ಅಗತ್ಯತೆಯನುಸಾರ ಆದ್ಯತೆ ಮೇಲೆ ತುರ್ತು ಕುಡಿಯುವ ನೀರಿನ ಕಾಮಗಾರಿಗಳನ್ನು ನಿರ್ವಹಿಸಲು **ಅನುಬಂಧ-1**ರಲ್ಲಿರುವಂತೆ **ರೂ.635.00ಲಕ್ಷ (ಅರು ನೂರ ಮುವತ್ತೈದು ಲಕ್ಷ ರೂಪಾಯಿಗಳು ಮಾತ್ರ)**ಗಳ ವಿಶೇಷ / ಹೆಚ್ಚುವರಿ ಅನುದಾನವನ್ನು **2012-13**ನೇ ಸಾಲಿನ **NRDWP- Scarcity** ಕೇಂದ್ರ ವಲಯದ ಘಟಕದಡಿ ರಾಜ್ಯದ **29** ಜಿಲ್ಲಾ ಪಂಚಾಯಿತಿಗಳಿಗೆ ಬಿಡುಗಡೆ ಮಾಡಲು ಸರ್ಕಾರವು ಹರ್ಷಿಸುತ್ತದೆ.

2. ಈ ಆದೇಶದಲ್ಲಿ ಬಿಡುಗಡೆಯಾದ ಅನುದಾನವು ಕೆಳಕಂಡ ನಿಬಂಧನೆಗೊಳಪಟ್ಟಿರುತ್ತದೆ:

- ಎಲ್ಲಿ ನೈಜವಾಗಿ ಕುಡಿಯುವ ನೀರಿನ ಸಮಸ್ಯೆಯಿದೆಯೋ ಅಂತಹ ಕಡೆಗಳಲ್ಲಿ ಮಾತ್ರ ಅಗತ್ಯ ಪುನಃಶ್ಚೇತನ (ಅಂದರೆ – ಕೊಳವೆ ಬಾವಿಗಳನ್ನು ಕೊರೆಯಿಸುವುದು, ಸ್ವಚ್ಛಗೊಳಿಸುವುದು, ಹೈಡ್ರೋಫ್ರಾಕ್ಚರಿಂಗ್‌ಗೊಳಿಸುವುದು, ಪಂಪ್ ಮೋಟಾರ್ ಅಳವಡಿಸುವುದು, ಪೈಪ್‌ಲೈನ್ ವಿಸ್ತರಣೆ) ದಂತಹ ಸಣ್ಣ ಪ್ರಮಾಣದ ಕಾಮಗಾರಿಗಳನ್ನು ಮಾತ್ರ ಅನುಷ್ಠಾನಗೊಳಿಸತಕ್ಕದ್ದು ಹಾಗೂ ಖಾಸಗಿ ಬೋರ್‌ವೆಲ್‌ಗಳ ಸೇವೆ ಪಡೆಯುವಂತಹ ಕ್ರಮಗಳನ್ನು ಕೈಗೊಳ್ಳತಕ್ಕದ್ದು.
- ತೀವ್ರ ಅನಿವಾರ್ಯವಿದ್ದಲ್ಲಿ ಮಾತ್ರ ಭೂ ವಿಜ್ಞಾನಿಗಳ ಸಲಹೆ ಮೇರೆಗೆ **ಹೊಸ ಬೋರ್‌ವೆಲ್‌**ಗಳನ್ನು ಕೊರೆಸಿ, ಸದರಿ ಬೋರ್‌ವೆಲ್‌ಗಳು ಸಾರ್ವಜನಿಕ ಉಪಯೋಗಕ್ಕೆ ಲಭ್ಯವಾಗುವಂತೆ ನೋಡಿಕೊಳ್ಳತಕ್ಕದ್ದು.
- ಹೊಸ ಬೋರ್‌ವೆಲ್‌ಗಳನ್ನು ಕೊರೆಯಬೇಕಾದಲ್ಲಿ ಆಯಾ ಜಿಲ್ಲಾಧಿಕಾರಿಗಳ ಸಮನ್ವಯದಲ್ಲಿ **CRF** ಹಣದಲ್ಲಿ ಅಗತ್ಯವಿರುವ ಮೋಟಾರ್ ಪಂಪ್‌ಗಳನ್ನು ಪಡೆದುಕೊಳ್ಳಲು ಸಹಮತಿ ಪಡೆಯತಕ್ಕದ್ದು.
- ಹೊಸ ಬೋರ್‌ವೆಲ್‌ಗಳನ್ನು ಕೊರೆಯುವಾಗ ಜಿಲ್ಲಾಧಿಕಾರಿಗಳು ಮೋಟಾರ್ ಪಂಪ್ ಇತ್ಯಾದಿ ವೆಚ್ಚ ಭರಿಸದಿದ್ದಲ್ಲಿ ಮಾತ್ರ ಅಂತಹ ವೆಚ್ಚವನ್ನು ಬೋರ್‌ವೆಲ್ ಕೊರೆಯುವ ಯೋಜನೆಯಡಿ ಅಳವಡಿಸಿಕೊಳ್ಳತಕ್ಕದ್ದು.
- ಹೊಸ ಕೊಳವೆ ಬಾವಿಗಳನ್ನು ಕೊರೆಯುವ ಮುನ್ನ ಅದರ ಸ್ಥಳ ಮತ್ತು ಗುರುತಿಗಾಗಿ **GPS System** ಮುಖೇನ ಅಧಿಕೃತ ದಾಖಲೆ ಮಾಡುವುದರ ಜೊತೆಗೆ, ಅದರ ಛಾಯಾಚಿತ್ರವನ್ನು ಕಾಮಗಾರಿಗೆ ಮುನ್ನ ಹಾಗೂ ನಂತರ ತೆಗೆದು ದಾಖಲಿಸತಕ್ಕದ್ದು. ಸಂಬಂಧಪಟ್ಟ ಸ್ಥಳೀಯ ಹಿರಿಯ ಅಧಿಕಾರಿ ಈ ಪ್ರಕ್ರಿಯೆಯನ್ನು ದೃಢೀಕರಿಸತಕ್ಕದ್ದು.
- ಈ ಆದೇಶದೊಂದಿಗೆ ಲಗತ್ತಿಸಿರುವ **ಅನುಬಂಧ-1**ರಲ್ಲಿನ ಅನುದಾನವನ್ನು ಮೇಲ್ಕಂಡ ಎಲ್ಲಾ ತುರ್ತು ಪುನಃಶ್ಚೇತನ ಕಾಮಗಾರಿಗಳ ಸಲುವಾಗಿ ಆಯಾ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಅನುಮೋದಿಸತಕ್ಕದ್ದು. ಈಗ ಒದಗಿಸಿರುವ ಅನುದಾನದ ಮಿತಿಯೊಳಗೆ ತುರ್ತು ಕಾಮಗಾರಿಗಳನ್ನು ಸ್ಥಳೀಯ ಅವಶ್ಯಕತೆ ಆಧರಿಸಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, **PRED**ಗಳ ಮುಖೇನ ಅನುಷ್ಠಾನಗೊಳಿಸತಕ್ಕದ್ದು. ಈ ರೀತಿ ಹಣ ವಿನಿಯೋಗಿಸುವಾಗ ಸ್ಥಳೀಯ ಟಾಸ್ಕ್‌ಫೋರ್ಸ್ ಸಮಿತಿ ಶಿಫಾರಸ್ಸುಗಳನ್ನು ಗಮನದಲ್ಲಿಟ್ಟುಕೊಳ್ಳಬೇಕು.

3. ಅನುಷ್ಠಾನಗೊಳಿಸುವ ಕಾಮಗಾರಿಗಳ ವಿವರಗಳನ್ನು ಸಂಬಂಧಪಟ್ಟ ಗ್ರಾಮ ಪಂಚಾಯಿತಿಗಳ ಮಾಹಿತಿಗಾಗಿ ಕಳುಹಿಸುವುದು. ಜಿಲ್ಲಾ ಪಂಚಾಯತ್‌ಗಳು ಯಾವುದೇ ಕಾರಣಕ್ಕೂ ಈ ಆದೇಶದಲ್ಲಿ ಹೇಳಲಾದ ಕಾಮಗಾರಿಗಳು ಇತರೆ ಗ್ರಾಮೀಣ ನೀರು ಸರಬರಾಜು ಯೋಜನೆಗಳಡಿ ಪುನರಾವರ್ತನೆಯಾಗದಂತೆ ನೋಡಿಕೊಳ್ಳತಕ್ಕದ್ದು. ಕಾಮಗಾರಿಗಳ ಅನುಷ್ಠಾನಕ್ಕೆ ಮುನ್ನ ಸಕ್ಷಮ ಪ್ರಾಧಿಕಾರದಿಂದ ತಾಂತ್ರಿಕ ಅನುಮೋದನೆ ಪಡೆದುಕೊಳ್ಳತಕ್ಕದ್ದು.

4. ಈ ಆದೇಶದಲ್ಲಿ ಬಿಡುಗಡೆಯಾದ ಅನುದಾನವನ್ನು **RTGS** ಮುಖೇನ ಈಗಾಗಲೇ ಗೊತ್ತುಪಡಿಸಿರುವ **SWSM** ಬ್ಯಾಂಕ್ ಖಾತೆ ಮುಖೇನ **(Coverage & Quality A/c No:04462010094572)** ರೂ.**635.00**ಲಕ್ಷಗಳನ್ನು ವಿನಿಯೋಗಿಸತಕ್ಕದ್ದು. ಸಿಂಡಿಕೇಟ್ ಬ್ಯಾಂಕ್, ಅವೆನ್ಯೂ ರಸ್ತೆ, ಬೆಂಗಳೂರು ರವರು ಸದರಿ ಅನುದಾನದಿಂದ **C&Q** ಘಟಕದಡಿ ಸಂಬಂಧಪಟ್ಟ ಜಿಲ್ಲಾ ಪಂಚಾಯತ್‌ಗಳು ಕಳುಹಿಸುವ ಬಿಲ್‌ಗಳನ್ನು ಮಾನ್ಯ ಮಾಡತಕ್ಕದ್ದು. ಈ ಅನುದಾನ ವಿನಿಯೋಗದ ಆರ್ಥಿಕ ಮತ್ತು ಭೌತಿಕ ಪ್ರಗತಿಗಳನ್ನು **CE/PRED** ಹಾಗೂ ಸಂಬಂಧಪಟ್ಟ ಜಿಲ್ಲಾ ಪಂಚಾಯತ್‌ಗಳು **IMIS**ನಡಿ ದಾಖಲಿಸತಕ್ಕದ್ದು.

5. ಸರ್ಕಾರದ ಸುತ್ತೋಲೆ ಸಂಖ್ಯೆ :ಗ್ರಾಅಪ 117 ಗ್ರಾನೀಸ(4) 2011 ದಿ:15.10.2011 ರನ್ವಯ ಅಧೀಕ್ಷಕ ಅಭಿಯಂತರರು, **PRED** ವೃತ್ತ ಕಛೇರಿ ಇವರುಗಳು ಈ ಆದೇಶದಡಿ ಅನುಷ್ಠಾನಗೊಳಿಸುವ ಕಾಮಗಾರಿಗಳಿಗೆ ಸಂಬಂಧಿಸಿದಂತೆ ಪರಿವೀಕ್ಷಣೆ ಮಾಡಿ, ಸರ್ಕಾರಕ್ಕೆ ವಾಸ್ತವಿಕ ಚಿತ್ರಣ ನೀಡತಕ್ಕದ್ದು.

6. ಈ ಆದೇಶವನ್ನು ಕೇಂದ್ರ ಸರ್ಕಾರದ ಆದೇಶ ಸಂಖ್ಯೆ: **W-11032/06/2012/Water/144, ದಿ:10.07.2012** ಹಾಗೂ ಗ್ರಾಅಪಂ.ರಾಜ್ ಇಲಾಖೆಯ **IFA**ರವರು ಯೋಜನೆಗಳ ಮುಂದುವರಿಕೆಗೆ ಹೊರಡಿಸಿರುವ ಆದೇಶ ಸಂಖ್ಯೆ: ಗ್ರಾಅಪ/13/ಆಂಅಸ /2012, ದಿ:02.04.2012ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ರಾಮಕೃಷ್ಣ)
ಸರ್ಕಾರದ ಉಪ ಕಾರ್ಯದರ್ಶಿ (ಗ್ರಾನೀಸ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

ಪ್ರತಿಗಳು:

1. ಮಹಾಲೇಖಪಾಲರು (ಲೆಕ್ಕಪತ್ರ) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು-1) ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಎಯು-2) ಕರ್ನಾಟಕ, ಬೆಂಗಳೂರು.
4. ಉಪ ಮಹಾಲೇಖಪಾಲರು, ಮಹಾಲೇಖಪಾಲರು (ಎಯು-1) ರವರ ಶಾಖಾ ಕಛೇರಿ, ಕಾಲೇಜು ರಸ್ತೆ, ಧಾರವಾಡ.
5. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು-1.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು-1.
7. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
8. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಯೋಜನಾ ಇಲಾಖೆ ಬೆಂಗಳೂರು.
9. ಸರ್ಕಾರದ ಕಾರ್ಯದರ್ಶಿಗಳು, ಕಂದಾಯ ಇಲಾಖೆ (DMC) ರವರ ಆಪ್ತ ಕಾರ್ಯದರ್ಶಿಗಳು, ಬೆಂಗಳೂರು-1.
10. ವಿಶೇಷಾಧಿಕಾರಿಗಳು (ಜಿಪಂ) ಹಾಗೂ ಸರ್ಕಾರದ ಪದನಿಮಿತ್ತ ಉಪಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ ಬೆಂಗಳೂರು.
11. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ (6) (ಜಿಪಂ) ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
12. ಮುಖ್ಯ ಇಂಜನಿಯರ್, ಪಂಚಾಯತ್‌ರಾಜ್ ಇಂಜನಿಯರಿಂಗ್ ಇಲಾಖೆ, ಕರ್ನಾಟಕ ಕೊಳಚೆ ನಿರ್ಮೂಲನಾಮಂಡಳಿ, ಸಂಕೀರ್ಣ ನಂ55, 4ನೇ ಮಹಡಿ, ಅಭಯ ಕಾಂಪ್ಲೆಕ್ಸ್, ರಿಸಲ್ದಾರ್ ರಸ್ತೆ, ಶೇಷಾದ್ರಿಪುರಂ, ಬೆಂಗಳೂರು-20.
13. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು (ಚಿಕ್ಕಬಳ್ಳಾಪುರ ಜಿಲ್ಲೆ ಹೊರತುಪಡಿಸಿ).
14. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಅಧ್ಯಕ್ಷರು (ಚಿಕ್ಕಬಳ್ಳಾಪುರ ಜಿಲ್ಲೆ ಹೊರತುಪಡಿಸಿ).
15. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ಮುಖ್ಯ ಲೆಕ್ಕಾಧಿಕಾರಿಗಳು (ಚಿಕ್ಕಬಳ್ಳಾಪುರ ಜಿಲ್ಲೆ ಹೊರತುಪಡಿಸಿ).
16. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತ್‌ಗಳ ಕಾರ್ಯನಿರ್ವಾಹಕ ಅಧಿಕಾರಿಗಳು (ಚಿಕ್ಕಬಳ್ಳಾಪುರ ಜಿಲ್ಲೆ ಹೊರತುಪಡಿಸಿ).
17. ರಾಜ್ಯದ ಎಲ್ಲಾ ಪಂಚಾಯತ್ ರಾಜ್ ಇಂಜನಿಯರಿಂಗ್ ವೃತ್ತಗಳ ಅಧೀಕ್ಷಕ ಅಭಿಯಂತರರು.
18. ರಾಜ್ಯದ ಎಲ್ಲಾ (38) ಪಂಚಾಯತ್ ರಾಜ್ ಇಂಜನಿಯರಿಂಗ್ ವಿಭಾಗದ ಕಾರ್ಯಪಾಲಕರ ಇಂಜನಿಯರ್‌ಗಳು (ಚಿಕ್ಕಬಳ್ಳಾಪುರ ಹೊರತುಪಡಿಸಿ).
19. ಮುಖ್ಯ ಲೆಕ್ಕಾಧಿಕಾರಿಗಳು, ಮುಖ್ಯ ಇಂಜನಿಯರ್‌ರ ಕಛೇರಿ, PRED, ಬೆಂಗಳೂರು-20.
20. ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ(ಪಂ.ರಾಜ್) ಇವರ ಆಪ್ತ ಕಾರ್ಯದರ್ಶಿಗಳು.
21. ನಿರ್ದೇಶಕರು KRWSSA ಪದನಿಮಿತ್ತ ಸರ್ಕಾರದ ಅಪರ ಕಾರ್ಯದರ್ಶಿ/ನಿರ್ದೇಶಕರು(ಗ್ರಾಮಸ್ವರಾಜ್)/ಆಂತರಿಕ ಆರ್ಥಿಕ ಸಲಹೆಗಾರರು, RDPR ಇಲಾಖೆ ಇವರುಗಳ ಆಪ್ತ ಸಹಾಯಕರು.
22. ಮ್ಯಾನೇಜರ್, ಸಿಂಡಿಕೇಟ್ ಬ್ಯಾಂಕ್, BWSSB Branch, ರಾಜಧೂತ್ ಕಾಂಪ್ಲೆಕ್ಸ್, ಅವೆನ್ಯೂ ರಸ್ತೆ, ಬೆಂಗಳೂರು-9.
23. ನಿರ್ದೇಶಕರು, ಶ್ರೀ ಅಬ್ದುಲ್ ನಜೀರ್‌ಸಾಬ್‌ರವರ ಗ್ರಾಮೀಣಾಭಿವೃದ್ಧಿ ರಾಜ್ಯ ಸಂಸ್ಥೆ, ಲಲಿತ್ ಮಹಲ್ ರಸ್ತೆ, ಮೈಸೂರು.
24. ಮುಖ್ಯ ಸಂಪಾದಕರು ಮತ್ತು ಸಂಪರ್ಕಾಧಿಕಾರಿ "ಕರ್ನಾಟಕ ವಿಕಾಸ" ಗ್ರಾಅಪಂ.ರಾಜ್ ಇಲಾಖೆ, ಬೆಂಗಳೂರು.
25. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾಅಪಂರಾ ಇಲಾಖೆ(ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು).
26. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ).
27. ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಮಾಹಿತಿ ಕೇಂದ್ರ (10 ಪ್ರತಿಗಳು).
28. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

ಅನುಬಂಧ-1

ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 45 ಗ್ರಾನೀಸ(2)2012,ಬೆಂಗಳೂರು. ದಿನಾಂಕ:20.07.2012ರ ಲಗತ್ತು

| ಕ್ರ. ಸಂ | ಜಿಲ್ಲೆ | ಬಿಡುಗಡೆಯಾದ ಅನುದಾನ (ರೂ.ಲಕ್ಷಗಳಲ್ಲಿ) |
|---|---|---|
| 1 | ಬೆಂಗಳೂರು(ನ) | 22.00 |
| 2 | ಬೆಂಗಳೂರು(ಗ್ರಾ) | 22.00 |
| 3 | ರಾಮನಗರ | 22.00 |
| 4 | ಕೋಲಾರ | 22.00 |
| 5 | ತುಮಕೂರು | 22.00 |
| 6 | ಚಿತ್ರದುರ್ಗ | 22.00 |
| 7 | ದಾವಣಗೆರೆ | 22.00 |
| 8 | ಶಿವಮೊಗ್ಗ | 22.00 |
| 9 | ಮೈಸೂರು | 22.00 |
| 10 | ಮಂಡ್ಯ | 22.00 |
| 11 | ಚಾಮರಾಜನಗರ | 22.00 |
| 12 | ಹಾಸನ | 22.00 |
| 13 | ದಕ್ಷಿಣ ಕನ್ನಡ | 21.00 |
| 14 | ಉಡುಪಿ | 21.00 |
| 15 | ಚಿಕ್ಕಮಗಳೂರು | 22.00 |
| 16 | ಕೊಡಗು | 21.00 |
| 17 | ಬೆಳಗಾಂ | 22.00 |
| 18 | ವಿಜಾಪುರ | 22.00 |
| 19 | ಬಾಗಲಕೋಟೆ | 22.00 |
| 20 | ಧಾರವಾಡ | 22.00 |
| 21 | ಹಾವೇರಿ | 22.00 |
| 22 | ಗದಗ | 22.00 |
| 23 | ಉತ್ತರ ಕನ್ನಡ | 22.00 |
| 24 | ಗುಲ್ಬರ್ಗಾ | 22.00 |
| 25 | ಯಾದಗಿರಿ | 22.00 |
| 26 | ಬೀದರ್ | 22.00 |
| 27 | ರಾಯಚೂರು | 22.00 |
| 28 | ಕೊಪ್ಪಳ | 22.00 |
| 29 | ಬಳ್ಳಾರಿ | 22.00 |
| | ಒಟ್ಟು | 635.00 |

(ರಾಮಕೃಷ್ಣ)
ಸರ್ಕಾರದ ಉಪ ಕಾರ್ಯದರ್ಶಿ (ಗ್ರಾನೀಸ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ